E-gov

ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ ಪದವಿ ಪೂರ್ವ ಶಿಕ್ಷಣ ಇಲಾಖೆ 18 ನೇ ಕ್ರಾಸ್ ಸಂಪಿಗೆ ರಸ್ತೆ ಮಲ್ಲೇಶ್ವರಂ ಬೆಂಗಳೂರು-12**

ಸಂಖ್ಯೆ: ಪಿಯು-01/3026/ಸಿಬ್ಬಂದಿ/ಸಿಆರ್-04/ಎನ್‌ಓಸಿ/2016-17 ದಿನಾಂಕ: 10/08/2017

## ಜ್ಞಾಪನ

**ವಿಷಯ:** ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ/ಬೋಧಕೇತರ ಸಿಬ್ಬಂದಿಗೆ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಕುರಿತು

**ಉಲ್ಲೇಖ:** 1. ಜಿಲ್ಲಾ ಉಪ ನಿರ್ದೇಶಕರು, ದಕ್ಷಿಣಕನ್ನಡ ಜಿಲ್ಲೆ ಇವರ ಪತ್ರದ ಸಂಖ್ಯೆ: ಪಪೂಶಿಇ.ಉ.ನಿ(1)/ಎಸ್‌ಎಸ್/ಇತರ/17-18 ದಿನಾಂಕ: 03-08-2017 (ಸ್ವೀಕೃತಿ:07-08-2017)

2. ಜಿಲ್ಲಾ ಉಪ ನಿರ್ದೇಶಕರು, ದಕ್ಷಿಣಕನ್ನಡ ಜಿಲ್ಲೆ ಇವರ ಪತ್ರದ ಸಂಖ್ಯೆ: ಪಪೂಶಿಇ/ಎಸ್‌ಎಸ್/NOC/17-18 ದಿನಾಂಕ: 25-07-2017 (ಸ್ವೀಕೃತಿ:07-08-2017)

***

ಈ ಕೆಳಕಂಡ ಉಪನ್ಯಾಸಕರಿಗೆ/ಬೋಧಕೇತರ ಸಿಬ್ಬಂದಿಗೆ ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಕೆ.ಪಿ.ಎಸ್.ಸಿ.ಯಿಂದ ಕರೆದಿರುವ ವಿವಿಧ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವಂತೆ ಜಿಲ್ಲಾ ಉಪ ನಿರ್ದೇಶಕರು ಉಲ್ಲೇಖಿತ ಪತ್ರಗಳಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿದ್ದು, ಈ ಕೆಳಕಂಡ ಉಪನ್ಯಾಸಕರ/ಬೋಧಕೇತರ ಸಿಬ್ಬಂದಿಯ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ/ಹುದ್ದೆಗೆ ಅರ್ಜಿ ಸಲ್ಲಿಸಲು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಉಪನ್ಯಾಸಕರ/ಬೋಧಕೇತರ ಸಿಬ್ಬಂದಿಯ ಹೆಸರು ಮತ್ತು ವಿಳಾಸ | ಹುದ್ದೆ/ಪರೀಕ್ಷೆಯ ಹೆಸರು |
|---|---|---|
| 1 | ಶ್ರೀ ಗೌತಮ್ ಕೆ. ಕಾಮತ್,<br>ವಾಣಿಜ್ಯಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಬೆಳ್ಳಾರೆ,<br>ಸುಳ್ಯ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಬೋಧಕರ ಹುದ್ದೆ |
| 2 | ಶ್ರೀ ಚಂದ್ರಶೇಖರ್ ಬಿ.ಕೆ.,<br>ಪ್ರಥಮ ದರ್ಜೆ ಸಹಾಯಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು, ಮುತ್ತೂರು,<br>ಮಂಗಳೂರು ತಾ॥ ದಕ್ಷಿಣ ಕನ್ನಡ ಜಿಲ್ಲೆ | ಕೆಪಿಎಸ್‌ಸಿ ಕರೆದಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಪ್ರಾಂಶುಪಾಲರು, ಆಂಗ್ಲ ಭಾಷಾ ಶಿಕ್ಷಕರು ಹಾಗೂ ಸಮಾಜವಿಜ್ಞಾನ ಶಿಕ್ಷಕರ ಹುದ್ದೆಗಳಿಗೆ |

1. ಸದರಿ ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸದರಿಯವರ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ ಸದರಿ ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ, ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿಬರುವಂತಿಲ್ಲ.
4. ಸದರಿಯವರು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯುವುದು.

10/8/17

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:**

1. ಜಿಲ್ಲಾ ಉಪ ನಿರ್ದೇಶಕರಿಗೆ ಮಾಹಿತಿಗಾಗಿ.
2. ಸಂಬಂಧಿಸಿದ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರ ಮುಖಾಂತರ.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
4. ಜ್ಞಾಪನ ಕಡತ.